**<u>ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ, ಗುಬ್ಬಿ</u>**

**ಅಸಲು ದಾವಾ ಸಂಖ್ಯೆ.444/2016** **ಪಿ.ಡಬ್ಲ್ಯೂ .2**

**ದಿನಾಂಕಃ 25.10.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆ ವಾದಿ ಪರ ವಕೀಲರಾದ ಶ್ರೀ. ಸಿ.ಎಸ್.ಎ. ರವರಿಂದ</u>**

ನಾನು ಈ ದಾವೆಯಲ್ಲಿ ವಾದಿಯ ಜಿಪಿಎ ಹೋಲ್ಡರ್ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯ ಸಂಗತಿಗಳಾಗಿರುತ್ತವೆ.

1. ದಿಃ 09-05-2013 ರ ನೊಂದಣಿಯಾದ ದಾನಪತ್ರವನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ.1 ಎಂದು ಗುರುತಿಸಲಾಯಿತು.

2. ಎಂ.ಆರ್.ನಂಃಹೆಚ್.2/2012-13 ಮತ್ತು ಎಂ.ಆರ್.ನಂಃ11/2006-07 ರ ದೃಢೀಕೃತ ನಕಲುಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ.2 ಮತ್ತು ನಿ.ಪಿ.3 ಎಂದು ಗುರುತಿಸಲಾಯಿತು.

3. 4 ಪಹಣಿಗಳನ್ನು ಹಾಜರುಪಡಿಸಿರುತ್ತೇನೆ ಅವುಗಳನ್ನು ನಿಪಿ.4 ರಿಂದ ನಿ.ಪಿ.7 ಎಂದು ಗುರುತಿಸಲಾಯಿತು.

4. ಆಕಾರ್ ಬಂದ್ ನ ದೃಢೀಕೃತನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ.8 ಎಂದು ಗುರುತಿಸಲಾಯಿತು.

5. ಹಿಸ್ಸಾ ಮೋಜಣಿಯ ದಾಖಲೆಯ ದೃಢೀಕೃತನಕಲನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ.9 ಎಂದು ಗುರುತಿಸಲಾಯಿತು.

6 . ದಿಃ 07-12-2021 ರ ಜನರಲ್ ಪವರ್ ಆಫ್ ಅಟಾರ್ನಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ.10 ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವಕಾಶ ಕೋರಿದ್ದು, ಸಮಯವಕಾಶ ನೀಡಲಾಯಿತು)**

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,**
**ಗುಬ್ಬಿ.**